ಮತ್ತೊಮ್ಮೆ ಪ್ರತಿ ಜಿಲ್ಲೆಯ ಮತ್ತೊಂದು ತಾಲ್ಲೂಕಿನಲ್ಲಿ ಡಯಾಲಿಸಿಸ್ ಕೇಂದ್ರ ತೆರೆಯುವ ಸಂದರ್ಭದಲ್ಲಿ ಪರಿಶೀಲಿಸಲಾಗುವುದು.

ಊ) ಇಲಾಖೆಯಲ್ಲಿ ಲಭ್ಯವಿರುವ ವೈದ್ಯರು, ತಜ್ಞ ವೈದ್ಯರು ಇತರೆ ಸಿಬ್ಬಂದಿ ಮತ್ತು ಮೂಲಭೂತ ಸೌಲಭ್ಯಗಳನ್ನು ಉಪಯೋಗಿಸಿಕೊಂಡು ಉತ್ತಮ ಚಿಕಿತ್ಸೆ ನೀಡಲು ಕ್ರಮ ಕೈಗೊಳ್ಳಲಾಗಿದೆ.

ಹಾಸ್ಟೆಲ್‌ಗಳಿಗೆ ಮೂಲಭೂತ ಸೌಲಭ್ಯಗಳು

413(984); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೊಳಪಡುವ ಬಾಲಕರ/ಬಾಲಕಿಯರ ವಿದ್ಯಾರ್ಥಿನಿಯರ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಅವು ಯಾವುವು (ಪೂರ್ಣ ವಿವರಗಳನ್ನು ನೀಡುವುದು);

ಆ) ಹಾಗಿದ್ದಲ್ಲಿ, ಈ ಹಾಸ್ಟೆಲ್‌ಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವ್ಯವಸ್ಥೆ ಕಲ್ಪಿಸಲಾಗಿದೆ; ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಒದಗಿಸಲಾಗಿರುವ ಸೌಲಭ್ಯಗಳೇನು (ಪೂರ್ಣ ವಿವರಗಳನ್ನು ನೀಡುವುದು);

ಇ) ಈ ವಸತಿ ನಿಲಯಗಳು ಸ್ವಂತ ಕಟ್ಟಡಗಳನ್ನು ಹೊಂದಿವೆಯೇ ಅಥವಾ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆಯೇ (ಸಂಪೂರ್ಣ ಮಾಹಿತಿ ನೀಡುವುದು);

ಈ) ಈ ವಿದ್ಯಾರ್ಥಿ ನಿಲಯಗಳಲ್ಲಿ ಸಿಬ್ಬಂದಿಗಳ ಕೊರತೆ ಹಾಗೂ ಮೂಲಭೂತ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಈ ವಿದ್ಯಾರ್ಥಿ ನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ), ಆ) ಮತ್ತು ಇ) ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಿರ್ವಹಿಸುತ್ತಿರುವ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳ ವಿವರಗಳು ಈ ಕೆಳಕಂಡಂತಿವೆ:

ವಿವರಗಳು	ಬಾಲಕ	ಬಾಲಕಿ	ಒಟ್ಟು
ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು	05	01	06
ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು	01	01	02
ಒಟ್ಟು	**06**	**02**	**08**

ವಿದ್ಯಾರ್ಥಿ ನಿಲಯಗಳ ವಿವರ, ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಒದಗಿಸಿದ ಸೌಲಭ್ಯಗಳ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ.

ಈ) ಹೌದು

ಉ) ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿರುವ 8 ವಿದ್ಯಾರ್ಥಿ ನಿಲಯಗಳಲ್ಲಿ, 3 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ, ಚನ್ನರಾಯಪಟ್ಟಣ ಟೌನ್, ಈ ವಿದ್ಯಾರ್ಥಿ ನಿಲಯಕ್ಕೆ ಮೂಲಭೂತ ಸೌಲಭ್ಯಗಳನ್ನು ಒಳಗೊಂಡ ಸ್ವಂತ ಕಟ್ಟಡ ನಿರ್ಮಾಣ ಕಾರ್ಯ ಜಾರಿಯಲ್ಲಿದೆ. ಉಳಿದ 4 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ನಿವೇಶನ ಪಡೆಯಲು ಕ್ರಮ ತೆಗೆದುಕೊಂಡಿದ್ದು, ನಿವೇಶನ ದೊರೆತ ಕೂಡಲೇ

ಮೂಲಭೂತ ಸೌಲಭ್ಯಗಳುಳ್ಳ ಸ್ವಂತ ಕಟ್ಟಡ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದು.

2013–14ನೇ ಸಾಲಿನಲ್ಲಿ ಚನ್ನರಾಯಪಟ್ಟಣದ 2 ವಿದ್ಯಾರ್ಥಿ ನಿಲಯಗಳಲ್ಲಿ ರೂ.60.31 ಲಕ್ಷಗಳ ವೆಚ್ಚದಲ್ಲಿ ಹೆಚ್ಚುವರಿ 5 ವಾಸದ ಕೊಠಡಿಗಳು, 8 ಶೌಚಾಲಯ ಮತ್ತು 8 ಸ್ನಾನದ ಗೃಹಗಳನ್ನು ನಿರ್ಮಾಣ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆ.

ವಿದಾನ ಸಭೆಯ ಸದಸ್ಯರಾದ ಶ್ರೀ ಬಾಲಕೃಷ್ಣ ಸಿ ಎನ್ (ಶ್ರವಣಬೆಳಗೊಳ) ರವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ:984ಕ್ಕೆ ಅನುಬಂಧ-1

ಕ್ರಸಂ	ವಿದ್ಯಾರ್ಥಿ ನಿಲಯಗಳ ಹೆಸರು	ಮಂಜೂರಾತಿ ಸಂಖ್ಯೆ	ದಾಖಲಾತಿ ಸಂಖ್ಯೆ	ಬಾಡಿಗೆ/ ಸ್ವಂತ ಕಟ್ಟಡದ ವಿವರ	ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯದ ನಿಲಯಾರ್ಥಿಗಳಿಗೆ ಒದಗಿಸಲಾದ ವಿವಿಧ ಸೌಲಭ್ಯಗಳ ವಿವರಗಳು	
					ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು	ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು
1	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಚನ್ನರಾಯಪಟ್ಟಣ	80	73	ಸ್ವಂತ	• ಮಾಹೆಯಾನ ರೂ 1000.00 ವೆಚ್ಚದಲ್ಲಿ ಭೋಜನ • ಮಾಹಯಾನ ರೂ 65 85ರ ವೆಚ್ಚದಲ್ಲಿ ಬಾಲಕರಿಗೆ ಮೈಸೂರು ಸ್ಯಾಂಡಲ್ ಸೋಪ್, ಮೈಸೂರು ಡಿಟರ್ಜೆಂಟ್ ಕೇಕ್, ಕೊಬ್ಬರಿ ಎಣ್ಣೆ, ಟೂತ್ ಪೇಸ್ಟ್ ಮತ್ತು ಟೂತ್ ಬ್ರಷ್ • ಮಾಹೆಯಾನ ರೂ 95 60ರ ವೆಚ್ಚದಲ್ಲಿ ಬಾಲಕಿಯರಿಗೆ ಈ ಮೇಲಿನ ಸಾಮಾಗ್ರಿಗಳ ಜೊತೆಗೆ ಹೆಚ್ಚುವರಿಯಾಗಿ ಟಾಲ್ಕಂ ಪೌಡರ್‌ನ್ನು ನೀಡಲಾಗುವುದು • ವಾರ್ಷಿಕ ರೂ 800.00ರ ವೆಚ್ಚದಲ್ಲಿ 02 ಜೊತೆ ಸಮವಸ್ತ್ರಗಳು. • ವಾರ್ಷಿಕ ರೂ 300 00ರ ವೆಚ್ಚದಲ್ಲಿ 01 ಜೊತೆ ಶೂ ಮತ್ತು ಸಾಕ್ಸ್ • ವಾರ್ಷಿಕ ರೂ 400 00ರ ವೆಚ್ಚದಲ್ಲಿ ಪಠ್ಯ ಪುಸ್ತಕ ಮತ್ತು ಲೇಖನ ಸಾಮಾಗ್ರಿ • ವಾರ್ಷಿಕ ರೂ 150 00 ರ ವೆಚ್ಚದಲ್ಲಿ ಬಾಲಕರಿಗೆ ಕ್ಷೌರದ ವೆಚ್ಚ • ಮೂರು ವರ್ಷಕ್ಕೊಮ್ಮೆ ರೂ.800.00 ವೆಚ್ಚದಲ್ಲಿ ಹಾಸಿಗೆ,ಹೊದಿಕೆ • ಪ್ರತಿ ನಿಲಯಕ್ಕೆ ವಾರ್ಷಿಕ ರೂ 3000 00 ವೆಚ್ಚದಲ್ಲಿ ದಿನ ಪತ್ರಿಕೆ/ವಾರ/ಮಾಸ ಪತ್ರಿಕೆಗಳ ವೆಚ್ಚ • ಪ್ರತಿ ನಿಲಯಕ್ಕೆ ವಾರ್ಷಿಕ ರೂ 5000 00 ರ ವೆಚ್ಚದಲ್ಲಿ ವೈದ್ಯಕೀಯ ಸೌಲಭ್ಯ • ವರ್ಷದಲ್ಲಿ 6 ತಿಂಗಳು ವಿಜ್ಞಾನ, ಗಣಿತ, ಇಂಗ್ಲೀಷ್ ಮತ್ತು ಇತರೆ ಸಾಮಾನ್ಯ ವಿಷಯಗಳಲ್ಲಿ 03 ಅರೆ ಕಾಲಿಕ ಬೋಧಕರಿಂದ ವಿಶೇಷ ಬೋಧನೆ	• ಮಾಹೆಯಾನ ರೂ 1100 00 ವೆಚ್ಚದಲ್ಲಿ ಭೋಜನ • ಮೂರು ವರ್ಷಕ್ಕೊಮ್ಮೆ ರೂ.1000 00 ವೆಚ್ಚದಲ್ಲಿ ಹಾಸಿಗೆ,ಹೊದಿಕೆ • ಪ್ರತಿ ನಿಲಯಕ್ಕೆ ವಾರ್ಷಿಕ ರೂ 3500 00 ವೆಚ್ಚದಲ್ಲಿ ದಿನ ಪತ್ರಿಕೆ/ವಾರ/ಮಾಸ ಪತ್ರಿಕೆಗಳ ವೆಚ್ಚ
2	ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ, ಚನ್ನರಾಯಪಟ್ಟಣ	60	45	ಸ್ವಂತ		
3	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಕಾಂತರಾಜಪುರ	50	29	ಸ್ವಂತ		
4	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಹಿರೀಸಾವೆ	50	35	ಬಾಡಿಗೆ		
5	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ, ಬಾಗೂರು	40	34	ಬಾಡಿಗೆ		
6	ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ ಶ್ರವಣಬೆಳಗೊಳ	75	35	ಬಾಡಿಗೆ		
	ಸರ್ಕಾರಿ ಕಾಲೇಜು ಬಾಲಕರ ವಿದ್ಯಾರ್ಥಿ ನಿಲಯ, ಚನ್ನರಾಯಪಟ್ಟಣ	69	86	ಬಾಡಿಗೆ (ನಿರ್ಮಾಣ ಹಂತದಲ್ಲಿದೆ)		
	ಸರ್ಕಾರಿ ಕಾಲೇಜು ಬಾಲಕಿಯರ ವಿದ್ಯಾರ್ಥಿ ನಿಲಯ, ಚನ್ನರಾಯಪಟ್ಟಣ	93	93	ಬಾಡಿಗೆ		